**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ:ಡಿಇವಿ/ಲೋಕ್/100/2017-18/18480, ದಿನಾಂಕ:02.042018.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 208, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 203 ಗ್ರಾಪಂಅ 2019, ದಿನಾಂಕ:19.02.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್ 10/18-19, ದಿನಾಂಕ:16.04.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 403 ಗ್ರಾಪಂಅ 2020, ದಿನಾಂಕ:16.05.2020.
6. ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ಲಿಖಿತ ಸಮಜಾಯಿಷಿ ದಿನಾಂಕ:13.07.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 403 ಗ್ರಾಪಂಅ 2020, ದಿನಾಂಕ:30.12.2020.

***

ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಶ್ರೀರಾಂಪುರ ಗ್ರಾಮ ಪಂಚಾಯಿತಿಯಿಂದ ಖರೀದಿ ನಿಯಮ ಹಾಗೂ ಪಾರದರ್ಶಕ ನಿಯಮಗಳನ್ನು ಉಲ್ಲಂಘಿಸಿ ವಿವಿಧ ದಿನಾಂಕಗಳಲ್ಲಿ ಡಿ.ಸಿ.ಬಿಲ್ ಮೂಲಕ ಒಟ್ಟು ರೂ.7,65,965/-ಗಳ ಮೊತ್ತವನ್ನು ಬೀದಿ ದೀಪಗಳನ್ನು ಮತ್ತು ಕುಡಿಯುವ ನೀರಿನ ಬಿಡಿಭಾಗಗಳನ್ನು ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಜಂಟಿ ಸಹಿ ಮಾಡಿ ಖರೀದಿಸಿರುವುದು. ಮುಂದುವರೆದು, ಶ್ರೀ ರಾಂಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಯು.ಜಿ.ಡಿ. ಸ್ವಚ್ಛತೆಯಲ್ಲಿ ನಡೆದಿರುವ ಕ್ರಮಗಳ ದೂರಿಗೆ ಸಂಬಂಧಿಸಿದಂತೆ ರಾಡಿಂಗ್ ಮೆಷಿನ್, ಜೆಟ್ ಮತ್ತು ಜೆಟ್ ಮೆಷಿನ್ ಮೂಲಕ ಸ್ವಚ್ಛಗೊಳಿಸುವ ಬಗ್ಗೆ ವಿವಿಧ ಡಿ.ಸಿ. ಬಿಲ್ ಮೂಲಕ ಒಟ್ಟು ರೂಪಾಯಿ ರೂ.1,23,435/-

...2

ಗಳನ್ನು ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಜಂಟಿ ಸಹಿ ಮಾಡಿ ವೆಚ್ಚ ಮಾಡಿರುವುದು. ಈ ವೆಚ್ಚಗಳಲ್ಲಿ ಕೆ.ಟಿ.ಪಿ.ಪಿ. ನಿಯಮಗಳು ಉಲ್ಲಂಘನೆಯಾಗಿರುವುದು ತನಿಖಾ ವರದಿಯಿಂದ ಕಂಡು ಬಂದಿರುತ್ತದೆ. ರೂ.5,000/-ಗಳಿಗೆ ಮೀರಿದ ಹಆಗೂ ರೂ.1,00,000/-ಗಳ ಒಳಗಿನ ಯಾವುದೇ ವೆಚ್ಚಗಳಿಗೆ ನಿಯಮಾನುಸಾರ ಕೋಟೇಷನ್ ಪಡೆಯಬೇಕಾಗಿದ್ದು, ಸದರಿ ಪ್ರಕರಣದಲ್ಲಿ ಯಾವುದೇ ಕೋಟೇಷನ್ ಇಲ್ಲದಿರುವ ಆರೋಪ ಕಂಡು ಬಂದಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ 43(ಎ), 48(4) ಮತ್ತು 48(5) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರನ್ವಯ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ ಈ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಇವರು ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಇವರಿಗೆ ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಮೇಲೆ ಓದಲಾದ ಕ್ರಮಾಂಕ(6) ರಲ್ಲಿ ಕೆಳಕಂಡಂತೆ ಲಿಖಿತ ಸಮಜಾಯಿಷಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪಂಚಾಯಿತಿಯಲ್ಲಿ ನಡೆಯುವ ಯಾವುದೇ ಖರೀದಿ-ವೆಚ್ಚಕ್ಕೆ ಸಂಬಂಧಿಸಿದಂತೆ ಏಕಪಕ್ಷೀಯವಾಗಿ ನಿರ್ಧಾರ ತೆಗೆದುಕೊಳ್ಳಲು ನನಗೆ ಸಾಧ್ಯ ಮತ್ತು ಅಧಿಕಾರವಿರುವುದಿಲ್ಲ. ಎಲ್ಲಾ ವಿಷಯಗಳು ಸಹ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಒಳಗೊಂಡಂತೆ, ಸರ್ವ ಸದಸ್ಯರುಗಳೂ ಸಭೆ ನಡೆಸಿ ಸರ್ವಾನುಮತದಿಂದ ನಿರ್ಣಯ ಕೈಗೊಂಡ ನಂತರ ಕಾಮಗಾರಿ ಅನುಮೋದಿಸಿ, ಆಯಾ ವ್ಯಾಪ್ತಿಯ ಗ್ರಾಮ ಪಂಚಾಯಿತಿ ಸದಸ್ಯರು ಕಾಮಗಾರಿ ಬಗ್ಗೆ ಗುಣಮಟ್ಟದ ಬಗ್ಗೆ ದೃಢೀಕರಿಸಿದ ಮೇರೆ, ನಿಯಮಾನುಸಾರ ಬಿಲ ಬಾಬ್ತು ಮೊಬಲಗನ್ನು ಅಧಿಕಾರಿಗಳು ಪಾವತಿಸಿರುತ್ತಾರೆ. ಪ್ರಸ್ತಾಪಿತ ವರ್ಷದಲ್ಲಿಯೂ ಸಹ ಮೇಲಾಧಿಕಾರಿಗಳು ಸದರ ಕಾಮಗಾರಿ ಬಗ್ಗೆ ಪರಿಶೀಲಿಸಿ, ಮೇಲು ಸಹಿ ಮಾಡುವುದರ ಜೊತೆಗೆ ಅಡಿಟ್‌ನಲ್ಲಿಯೂ ಸಹ ಯಾವುದೇ ಲೋಪ-ದೋಷವಿಲ್ಲದ ಬಗ್ಗೆ ವರದಿ ನೀಡಲಾಗಿರುತ್ತದೆ.

..3

ನನ್ನ ಮೇಲೆ ವಿನಾಕಾರಣ ದುರುದ್ದೇಶವಾಗಿ ಮಹಿಳೆಯಾದ ನನ್ನ ಒಬ್ಬಳನ್ನೇ ಗುರಿಯಾಗಿಸಿಕೊಂಡು ರಾಜಕೀಯ ಪ್ರೇರಿತರಾಗಿ ಮಾನಸಿಕ ಹಿಂಸೆ ನೀಡುವ ಉದ್ದೇಶದಿಂದ ದೂರು ನೀಡಿರುತ್ತಾರೆ.

ಗ್ರಾಮ ಪಂಚಾಯಿತಿಯ ಸರ್ವ ಸದಸ್ಯರ ಸಭಾ ಅನುಮೋದನೆ, ಮೇಲಾಧಿಕಾರಿಗಳ ಪರಿಶೀಲನೆ ಮತ್ತು ಅಧಿಕಾರಿ ವರ್ಗ, ಆಡಿಟ್ ವರದಿ ಎಲ್ಲಾ ಇದ್ದಾಗಿಯೂ, ಇಂತಹ ವ್ಯವಸ್ಥೆಯನ್ನು ಬದಿಗಿರಿಸಿ ನನ್ನ ಒಬ್ಬಳನ್ನೇ ಗುರಿಯಾಗಿಸಿರುವುದು ದುರುದ್ದೇಶವಾಗಿರುತ್ತದೆ ಎಂಬುವುದಾಗಿ ತಿಳಿಸಿರುತ್ತಾರೆ.

ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶವನ್ನು ನೀಡಲು ನಿರ್ಣಯಿಸಿ, ಮೇಲೆ ಓದಲಾದ ಕ್ರಮಾಂಕ(7) ರಲ್ಲಿ ವಿಚಾರಣಾ ನೋಟಿಸ್ಸನ್ನು ಜಾರಿ ಮಾಡಿ ಪ್ರಕರಣವನ್ನು ದಿನಾಂಕ:13.01.2021 ರಂದು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಗಿದೆ. ಸದರಿ ವಿಚಾರಣೆಗೆ ಎದುರುದಾರರು ಗೈರು ಹಾಜರಾಗಿರುತ್ತಾರೆ ಈ ಹಿನ್ನೆಲೆಯಲ್ಲಿ ಎದುರುದಾರರಿಗೆ ಮತ್ತೊಂದು ಅವಕಾಶವನ್ನು ನೀಡಲು ನಿರ್ಣಯಿಸಿ ದಿನಾಂಕ:28.01.2021 ರಂದು ವಿಚಾರಣೆ ನಡೆಸಲಾಗಿದ್ದು, ಈ ವಿಚಾರಣೆಗೂ ಕೂಡ ಎದುರುದಾರರು ಗೈರು ಹಾಜರಾಗಿರುತ್ತಾರೆ. ಎದುರುದಾರರಿಗೆ ಅಹವಾಲು ಹೇಳಿಕೊಳ್ಳಲು ಸಾಕಷ್ಟು ಅವಕಾಶವನ್ನು ನೀಡಲಾಗಿದೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ಇವರು ಸಲ್ಲಿಸಿರುವ ದಾಖಲೆಗಳು, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ವರದಿಯನ್ನು ಹಾಗೂ ಎದುರುದಾರರಾದ ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು ಇವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ) ಹಾಗೂ 48(4) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಿದಾಗ, ಹಿಂದಿನ ಅಧ್ಯಕ್ಷರು, ತಮ್ಮ ಅಧಿಕಾರಾವಧಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವುದು ಸಾಬೀತಾಗಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2020 ರ ಪ್ರಕರಣ 43(ಎ)(vi) ರಡಿ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಶ್ರೀರಾಂಪುರ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಹಾಗೂ ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ನಿರ್ಧರಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 403 ಗ್ರಾಪಂಅ 2020, ಬೆಂಗಳೂರು, ದಿನಾಂಕ:29.03.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಆರೋಪವು ಸಾಬೀತಾಗಿದ್ದು, ಸದರಿಯವರು ಪ್ರಸ್ತುತ ಗ್ರಾಮ

...4

ಪಂಚಾಯಿತಿಯ ಸದಸ್ಯರಲ್ಲದ ಕಾರಣ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 1993ರ ಪ್ರಕರಣ 43(ಎ)(vi) ರಡಿ ಇವರನ್ನು ಸದರಿ ಅಧಿನಿಯಮದ 12(ಎಲ್) ರನ್ವಯ ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 29/03/21
(ನವೀನ್‌ಕುಮಾರ್ ಬಿ.)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ. (ಜಿ.ಪಂ)

<u>ಗೆ:</u>

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಬೆಂಗಳೂರು.-09
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು, ಮೈಸೂರು ಜಿಲ್ಲೆ.
5) ಶ್ರೀಮತಿ ಚೂಡಾಮಣಿ, ಹಿಂದಿನ ಅಧ್ಯಕ್ಷರು, ಶ್ರೀರಾಂಪುರ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.